2333(2580) ಶ್ರೀ ಮಾರಿಹಾಳ ಸುರೇಶ್ ಶಿವರುದ್ರಪ್ಪ (ಕಿತ್ತೂರು):– ಮಾನ್ಯ ಪೌರಾಡಳಿತ ಹಾಗೂ ಕೆ.ಯು.ಐ,ಡಿ.ಎಫ್.ಸಿ. ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಕಿತ್ತೂರ ಗ್ರಾಮ ಪಂಚಾಯತಿಯನ್ನು ಮೇಲ್ದರ್ಜೆಗೆ ಏರಿಸಲು (ಪುರಸಭೆಯಾಗಿ ಪರಿವರ್ತಿಸಲು) ಒತ್ತಾಯಿಸಿ ಗ್ರಾಮಸ್ಥರು ಪಂಚಾಯತ್ ಚುನಾವಣೆಯನ್ನು ಬಹಿಷ್ಕರಿಸಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದರೆ, ಸರ್ಕಾರ ಪ್ರಸಕ್ತ ಸಾಲಿನಲ್ಲಿ ಕಿತ್ತೂರ ಗ್ರಾಮ ಪಂಚಾಯತಿಯನ್ನು ಪುರಸಭೆಯಾಗಿ ಪರಿವರ್ತಿಸುವುದೇ?

ಶ್ರೀ ಎಸ್. ಆರ್. ಮೋರೆ (ಪೌರಾಡಳಿತ ಹಾಗೂ ಕೆ.ಯು.ಐ,ಡಿ.ಎಫ್.ಸಿ. ಸಚಿವರು)

ಅ) ಬಂದಿದೆ

ಆ) ಕರ್ನಾಟಕ ಪುರಸಭೆ ಕಾಯ್ದೆ 1964ರ ನಿಯಮ 3, 9 ಮತ್ತು 349 ರನ್ವಯ ಪುರಸಭೆಯಾಗಿ ಪರಿವರ್ತಿಸಲು ಎಲ್ಲಾ ಲಕ್ಷಣಗಳು ಹೊಂದಿದಲ್ಲಿ ಜಿಲ್ಲಾಧಿಕಾರಿಗಳಿಂದ ಪ್ರಸ್ತಾವನೆ ಪಡೆದು ಪರಿಶೀಲಿಸಲಾಗುವುದು.

2334(2581) ಶ್ರೀ ಮಾರಿಹಾಳ ಸುರೇಶ್ ಶಿವರುದ್ರಪ್ಪ (ಕಿತ್ತೂರು):– ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕಿತ್ತೂರ ಪಟ್ಟಣ ಬೈಲಹೊಂಗಲದಿಂದ 40 ಕಿ.ಮೀ. ದೂರವಿದ್ದು ಬಸ್ಸುಗಳ ಸೌಲಭ್ಯಗಳು ಇರದೇ ಜನ ಸಾಮಾನ್ಯರು ನ್ಯಾಯಾಲಯಕ್ಕೆ ಹೋಗಿ ಬರುವುದು ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇಪ್ಪತ್ತು ಸಾವಿರ ಜನಸಂಖ್ಯೆಯುಳ್ಳ ಕಿತ್ತೂರ ಪಟ್ಟಣಕ್ಕೆ ಜನತೆಯ ಅನುಕೂಲ ದೃಷ್ಟಿಯಿಂದ ಹೆಚ್ಚುವರಿ ನ್ಯಾಯಾಲಯ (ಅಡಿಷನಲ್ ಕೋರ್ಟ್) ಸ್ಥಾಪಿಸುವ ವಿಷಯ ಸರ್ಕಾರದ ಮುಂದಿದೆಯೇ?

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ;

ಆ) ಕಿತ್ತೂರಿನಲ್ಲಿ ಹೆಚ್ಚುವರಿ ನ್ಯಾಯಾಲಯ ಸ್ಥಾಪಿಸುವ ವಿಷಯ ತನ್ನ ಮುಂದಿರುವುದಿಲ್ಲ ಎಂದು ರಾಜ್ಯ ಉಚ್ಚ ನ್ಯಾಯಾಲಯವು ತಿಳಿಸಿದೆ. ಈ ವಿಷಯ ಕುರಿತಂತೆ ಯಾವುದೇ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಸ್ವೀಕೃತವಾಗಿರುವುದಿಲ್ಲ.

2335(2582) ಶ್ರೀ ಮಾರಿಹಾಳ ಸುರೇಶ್ ಶಿವರುದ್ರಪ್ಪ (ಕಿತ್ತೂರು):– ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?